# ಕರ್ನಾಟಕ ವಿಧಾನ ಪರಿಷತ್ತು

**152ನೇ ಅಧಿವೇಶನ**

| ನಿಯಮ-72ರಡಿಯ ಸೂಚನೆ | |
|---|---|
| ಸೂಚನೆ ನೀಡಿದ ಮಾನ್ಯ ಸದಸ್ಯರುಗಳ ಹೆಸರು | ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಎಸ್.ಎಲ್ ಬೋಜೇಗೌಡ ಹಾಗೂ ಶ್ರೀ ಮಧು ಜಿ.ಮಾದೇಗೌಡ |

## ಸೂಚನೆಯ ವಿಷಯ

ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ 6ನೇ ವೇತನ ಆಯೋಗ ಮತ್ತು 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಬಾಕಿಯನ್ನು ಇದುವರವಿಗೂ ಪಾವತಿಸದೆ ಇರುವುದು ಹಾಗೂ ಎ.ಜಿ.ಪಿ (ಸ್ಥಾನೀಕರಣ ಪದೋನ್ನತಿ) ಸಿ.ಎ.ಎಸ್., ಎಐಸಿಟಿಇ ನಿಯಮಾವಳಿಯಂತೆ ಅರ್ಹ ದಿನಾಂಕದಿಂದ ಪದೋನ್ನತಿಗೆ ಪರಿಗಣಿಸದೆ ಬಡ್ತಿ ನೀಡುವಲ್ಲಿ ವಿಳಂಬ ಉಂಟಾಗುತ್ತಿರುವುದು ಮತ್ತು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗ ಸಿ.ಎ.ಎಸ್., ಎ.ಜಿ.ಪಿ (ಸ್ಥಾನೀಕರಣ ಪದೋನ್ನತಿ) ನೀಡುವಲ್ಲಿ ವಿಳಂಬ ಉಂಟಾಗುತ್ತಿರುವುದು ಹಾಗೂ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತರದೆ ಇರುವುದರಿಂದ ದೀರ್ಘಕಾಲದಿಂದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲೂ ಪ್ರಾಂಶುಪಾಲರ ಹುದ್ದೆ ಖಾಲಿ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ.

## ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ

## 6ನೇ ಮತ್ತು 7ನೇ ವೇತನ ಅಯೋಗದ ಶಿಫಾರಸ್ಸಿನಂತೆ ವೇತನ ಬಾಕಿಯ ಬಗ್ಗೆ:

ಸರ್ಕಾರದ ಆದೇಶ ಸಂಖ್ಯೆ:ಇಡಿ 12 ಡಿಟಿಇ 2019, ದಿನಾಂಕ:24.03.2020ರಲ್ಲಿ ಇಲಾಖಾ ವ್ಯಾಪ್ತಿಗೊಳಪಡುವ ಸರ್ಕಾರಿ/ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಬೋಧಕರು ಹಾಗೂ ತತ್ಸಮಾನ ವೃಂದದವರಿಗೆ 2016ರ 7ನೇ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಯನ್ವಯ ದಿನಾಂಕ:01.01.2016 ರಿಂದ ಪೂರ್ವಾನ್ವಯವಾಗುವಂತೆ ವೇತನ ನಿಗದಿಪಡಿಸಿ ದಿನಾಂಕ:01.01.2016 ರಿಂದ 31.03.2020ರ ಅವಧಿಯ ವೇತನ ವ್ಯತ್ಯಾಸದ ಬಾಕಿಗಳನ್ನು ಪಾವತಿಸಲು ಅನುಮತಿ ನೀಡಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ:ಇಡಿ 58 ಹೆಚ್.ಪಿ.ಸಿ 2022, ದಿನಾಂಕ:30.03.2022ರಲ್ಲಿ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜು /ಬಿ.ಎಡ್ ಕಾಲೇಜು/ಇಂಜಿನಿಯರಿಂಗ್ ಕಾಲೇಜು ಹಾಗೂ ವಿಶ್ವ ವಿದ್ಯಾಲಯಗಳ ಬೋದಕ ಹಾಗೂ ತತ್ಸಮಾನ ಸಿಬ್ಬಂದಿಗಳಿಗೆ 2006 ಮತ್ತು 2016ರ ಪರಿಷ್ಕೃತ ಯುಜಿಸಿ/ಎಐಸಿಟಿಇ ವೇತನ ಶ್ರೇಣಿಯ ವ್ಯತ್ಯಾಸದ ಬಾಕಿ ಮೊತ್ತವನ್ನು ಪಾವತಿಸಲು ಲೆಕ್ಕಶೀರ್ಷಿಕೆ:2202-01-800-1-91-014ರಡಿ ರೂ 45,469.22 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಿ ಸದರಿ ಅನುದಾನವನ್ನು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪಿ.ಡಿ ಖಾತೆಯಲ್ಲಿ ಜಮೆ ಮಾಡಿ ಬಳಕೆ ಮಾಡಲು ಸರ್ಕಾರದ ಅನುಮತಿ ನೀಡಿ, ಸದರಿ ಆದೇಶದಲ್ಲಿ ಅನುದಾನ ಬಳಕೆ ಮಾಡುವ ಮೊದಲು ಸರ್ಕಾರದ ಅನುಮೋದನೆ ಪಡೆಯಬೇಕೆಂಬ ಷರತ್ತು ವಿಧಿಸಲಾಗಿತ್ತು ಹಾಗೂ ಪಿ.ಡಿ ಖಾತೆಯಲ್ಲಿ ಲಭ್ಯವಿರುವ ಅನುದಾನವನ್ನು ದಿನಾಂಕ:31.03.2023ರವರೆಗೆ ಮಾತ್ರ ಬಳಕೆ ಮಾಡಲು ಅನುಮತಿ ನೀಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ:ಇಡಿ 19 ಹೆಚ್‌ಪಿಟಿ 2022, ದಿನಾಂಕ:29.03.2023ರ ಆದೇಶದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಹಾಗೂ ಅನುದಾನಿತ ಇಂಜಿನಿಯರಿಂಗ್ ಬೋಧಕ ಸಿಬ್ಬಂದಿಯವರಿಗೆ

6ನೇ ಮತ್ತು 7ನೇ ವೇತನ ಶ್ರೇಣಿಯ ಬಾಕಿ ವೇತನ ಸರಿ ಸುಮಾರು 1160 ಬೋಧಕ ಸಿಬ್ಬಂದಿಗಳಿಗೆ ರೂ.41,76,31,141/-ಗಳನ್ನು ಪಾವತಿಸಲು ಹಾಗೂ ಹೆಚ್ಚುವರಿಯಾಗಿ ಪಾವತಿಸಿದ ಮೊತ್ತ ರೂ.1,09,96,884/-ಗಳನ್ನು ಸಂಬಂಧಪಟ್ಟ ಬೋಧಕ ಸಿಬ್ಬಂದಿಯವರಿಂದ ಹಿಂಪಡೆದು ಸರ್ಕಾರಕ್ಕೆ ಜಮೆ ಮಾಡಲು ಷರತ್ತುಗಳನ್ವಯ ಆದೇಶಿಸಲಾಗಿತ್ತು. ಆದರೆ, 2022-23ನೇ ಆರ್ಥಿಕ ಸಾಲಿನ ವರ್ಷಾಂತ್ಯವಾದ್ದರಿಂದ ಷರತ್ತುಗಳನ್ನು ಪರಿಶೀಲಿಸಲು ಹಾಗೂ ಬೋಧಕ ಸಿಬ್ಬಂದಿಯವರಿಗೆ ಅನುದಾನವನ್ನು ಬಿಡುಗಡೆ ಮಾಡಲು ಕಾಲಾವಕಾಶ ಕಡಿಮೆ ಇದ್ದ ಕಾರಣ ಅನುದಾನ ಬಳಕೆ ಮಾಡಲು ಸಾಧ್ಯವಾಗಿರುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ:ಆಇ 53 ಟಿಎಆರ್ 2022, ದಿನಾಂಕ:20.04.2023ರಲ್ಲಿ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಬೆಂಗಳೂರು ಇವರ ಪಿ.ಡಿ ಖಾತೆ ಲೆಕ್ಕ ಶೀರ್ಷಿಕೆ "8443-00-106-0-18-679"ರಲ್ಲಿ ವಿವಿಧ ಯೋಜನೆ ಮತ್ತು ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪಿ.ಡಿ ಖಾತೆಯಲ್ಲಿ ಉಳಿದಿರುವ ಅನುದಾನಗಳನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗಳಿಗೆ ವರ್ಗಾವಣೆ ಮಾಡಿ ವೈಯಕ್ತಿಕ ಠೇವಣಿ ಖಾತೆಯನ್ನು ಮುಕ್ತಾಯಗೊಳಿಸಲು ಆದೇಶಿಸಿದ್ದು, ಪ್ರಸ್ತುತ ಪಿ.ಡಿ ಖಾತೆಯಲ್ಲಿ ಯಾವುದೇ ಅನುದಾನ ಲಭ್ಯವಿರುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ:ಇಡಿ 19 ಹೆಚ್‌ಪಿಟಿ 2022, ದಿನಾಂಕ:29.03.2023ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಹಾಗೂ ಅನುದಾನಿತ ಇಂಜಿನಿಯರಿಂಗ್ ಬೋಧಕ ಸಿಬ್ಬಂದಿಯವರಿಗೆ 6ನೇ ಮತ್ತು 7ನೇ ವೇತನ ಶ್ರೇಣಿಯ ಬಾಕಿ ವೇತನ ಪಾವತಿಸಲು ಮತ್ತು ಹೆಚ್ಚುವರಿಯಾಗಿ ಪಾವತಿಸಲಾಗಿರುವ ವೇತನವನ್ನು ಸಂಬಂಧಪಟ್ಟವರಿಂದ ಹಿಂಪಡೆದು ಸರ್ಕಾರಕ್ಕೆ ಜಮಾ ಮಾಡುವ ಸಂಬಂಧ ಸದರಿ ಆದೇಶದಲ್ಲಿನ ಷರತ್ತುಗಳಂತೆ ಪರಿಶೀಲಿಸಲಾಗುತ್ತಿದ್ದು, ಅವಶ್ಯವಿರುವ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಿ ಪಾವತಿಸಲು ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲು ಪರಿಶೀಲಿಸಲಾಗುತ್ತಿದೆ.

**<u>ಎಐಸಿಟಿಇ ನಿಯಮಾವಳಿಗಳನ್ವಯ ಸಿ.ಎ.ಎಸ್ ಮುಂಬಡ್ತಿ ಬಗ್ಗೆ:</u>**

ಸರ್ಕಾರದ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ:10.11.2020 ಮತ್ತು ಸರ್ಕಾರದ ಆದೇಶ ಸಂಖ್ಯೆ:ಇಡಿ 20 ಡಿಟಿಇ 2018, ದಿನಾಂಕ:08.12.2020ರಲ್ಲಿ ಸರ್ಕಾರಿ/ ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆ ಆಧಾರಿತ ವೃತ್ತಿ ಪದೋನ್ನತಿ (Career Adavancement Scheme) ಸೌಲಭ್ಯಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. All India Council for Technical Education Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಿ ನಿಗದಿತ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ವೃತ್ತಿ ಪದೋನ್ನತಿ (Career Adavancement Scheme) ಸೌಲಭ್ಯವನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ಸದರಿ ಆದೇಶದಲ್ಲಿ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಈಗಾಗಲೇ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಮಂಜೂರು ಮಾಡಲಾಗಿರುವ ಸೌಲಭ್ಯಗಳನ್ನು ಮತ್ತು ಮುಂದೆ ಮಂಜೂರು ಮಾಡಲಾಗುವ ಎಲ್ಲಾ ಪ್ರಕರಣಗಳನ್ನು ಲೆಕ್ಕಪರಿಶೋಧನೆಗೆ ಒಳಪಡಿಸಿ ಎಐಸಿಟಿಇಯು ನಿಗದಿಪಡಿಸಿರುವ ಅರ್ಹತೆಗಳನ್ನು ಪೂರೈಸಿರುವ ಹಾಗೂ ನಿಗದಿತ ವಿದ್ಯಾರ್ಹತೆಯನ್ನು ಹೊಂದಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು ಎಂದು ಆದೇಶಿಸಲಾಗಿದೆ.

ಅದರಂತೆ, ಎಲ್ಲಾ ಪ್ರಕರಣಗಳನ್ನು ಮರುಪರಿಶೀಲಿಸಿ ಲೆಕ್ಕಪರಿಶೋಧನೆಗೆ ಒಳಪಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು ತ್ವರಿತಗತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು.

ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಬೋಧಕರುಗಳಿಗೆ ಎಐಸಿಟಿಇ (All India Council for Technical Education) ಕಾಲಕಾಲಕ್ಕೆ ಹೊರಡಿಸಿರುವ ಅಧಿಸೂಚನೆ/ಸ್ಪಷ್ಟೀಕರಣ/ ನಿಯಮಾವಳಿಗಳನ್ವಯ ಹಾಗೂ ಸದರಿ

ನಿಯಮಗಳನ್ನು ರಾಜ್ಯ ಸರ್ಕಾರವು ಅನುಷ್ಠಾನಗೊಳಿಸಿ ಆದೇಶಿಸಿರುವ ಆದೇಶದ ಮೇರೆಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ 232 ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳ 61 ಬೋಧಕರುಗಳಿಗೆ 2023ನೇ ಸಾಲಿನಲ್ಲಿ ಕೆರಿಯರ್ ಅಡ್ವಾನ್ಸ್ ಮೆಂಟ್ ಯೋಜನೆಯಡಿ ವಿವಿಧ ಹಂತದ ಎಜಿಪಿ (Academic Grade Pay) ಗಳನ್ನು ಮಂಜೂರು ಮಾಡಲಾಗಿರುತ್ತದೆ.

ಮುಂದುವರೆದು, ಸರ್ಕಾರಿ ಪಾಲಿಟೆಕ್ನಿಕ್ ಬೋಧಕ ವೃಂದದವರು 6ನೇ ಎಐಸಿಟಿಇ ವೇತನ ಶ್ರೇಣಿಯನ್ವಯ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಎಜಿಪಿ (Academic Grade Pay) ಪಡೆಯಲು ಸಲ್ಲಿಸಿರುವ ವಿವಿಧ ಹಂತಗಳ ಎಜಿಪಿಗಳ ಪ್ರಸ್ತಾವನೆಯನ್ನು ಕಾಲೇಜು ಹಂತದ ಐಕ್ಯೂಎಸಿ (Internal Quality Assurance Cell) ಸಮಿತಿಯು ಪರಿಶೀಲಿಸಿ, ಅರ್ಹ ಉಪನ್ಯಾಸಕರುಗಳ ಪ್ರಸ್ತಾವನೆಗಳನ್ನು ಸೂಕ್ತ ಶಿಪಾರಸ್ಸಿನೊಂದಿಗೆ ಆಯುಕ್ತಾಲಯಕ್ಕೆ ಸಲ್ಲಿಸಲಾದ/ಸ್ವೀಕೃತವಾದ ಎಲ್ಲಾ ಪ್ರಸ್ತಾವನೆಗಳನ್ನು ದಿನಾಂಕ:29.12.2023ರಂದು ನಡೆದ ತಾಂತ್ರಿಕ ಶಿಕ್ಷಣ ಇಲಾಖೆಯ ಹಂತದ ಸ್ಕ್ರಾನೀಕರಣ/ತಜ್ಞರ ಸಮಿತಿಯು (Screening Cum Evaluation) ಪರಿಶೀಲಿಸಿ, ಒಟ್ಟು 548 ಉಪನ್ಯಾಸಕರುಗಳಿಗೆ ವಿವಿಧ ಹಂತದ ಎಜಿಪಿ (Academic Grade Pay) ಮಂಜೂರು ಮಾಡಲು ಶಿಫಾರಸ್ಸು ಮಾಡಿದ್ದು, ಪ್ರಸ್ತುತ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.

ಉಳಿದಂತೆ, ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ವೃಂದದವರಿಗೆ 6ನೇ ಎಐಸಿಟಿಇ ವೇತನ ಶ್ರೇಣಿಯನ್ವಯ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಎಜಿಪಿ ಮಂಜೂರು ಮಾಡಲು ಬಾಕಿಯಿರುವ ಪ್ರಸ್ತಾವನೆಗಳನ್ನು ಇಲಾಖಾ ಹಂತದಲ್ಲಿ ಪರಿಶೀಲಿಸಲಾಗುತ್ತಿದ್ದು, ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ:ಇಡಿ 89 ಡಿಟಿಇ 2023, ದಿನಾಂಕ:01.12.2023 ಮತ್ತು ಸರ್ಕಾರದ ಪತ್ರ ಸಂಖ್ಯೆ:ಇಡಿ 86 ಡಿಟಿಇ 2023, ದಿನಾಂಕ:07.10.2023ರಲ್ಲಿ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್‌ಗಳಲ್ಲಿ 7ನೇ ಎಐಸಿಟಿಇ ವೇತನ ಶ್ರೇಣಿಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ವರ್ಗದವರಿಗೆ ಕೆರಿಯರ್ ಅಡ್ವಾನ್ಸ್ ಮೆಂಟ್ ಯೋಜನೆಯಡಿ ವಿವಿಧ ಹಂತದ ಆರ್ಥಿಕ ಸೌಲಭ್ಯಗಳನ್ನು (Stage and Level) ಮಂಜೂರು ಮಾಡುವ ಪ್ರಸ್ತಾವನೆಯನ್ನು ಪರಿಶೀಲಿಸಲು ವಿಷಯ ತಜ್ಞರುಗಳನ್ನೊಳಗೊಂಡ ಸ್ಕ್ರಾನೀಕರಣ ಸಮಿತಿಯನ್ನು ರಚಿಸಲು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿರುತ್ತದೆ ಹಾಗೂ ಸದರಿ ಸಮಿತಿ ಸಭೆಯನ್ನು ಪ್ರತಿ 06 ತಿಂಗಳಿಗೊಮ್ಮೆ ನಡೆಸಿ, ಅದರ ತೀರ್ಮಾನದಂತೆ ಅರ್ಹ ಬೋಧಕ ವರ್ಗದವರಿಗೆ ಪದೋನ್ನತಿ ನೀಡುವ ಕುರಿತು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ತಿಳಿಸಲಾಗಿರುತ್ತದೆ.

**ವೃಂದ ಮತ್ತು ನೇಮಕಾತಿ ನಿಯಮಾವಳಿಗಳ (Cadre and Recuritment Rules) ತಿದ್ದುಪಡಿಯ ಬಗ್ಗೆ:**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಪ್ರಾಂಶುಪಾಲರ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| ಸಂಸ್ಥೆಗಳು | ಹುದ್ದೆಗಳು | ಮಂಜೂರದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳು |
|---|---|---|---|---|
| ಸರ್ಕಾರಿ ಪಾಲಿಟೆಕ್ನಿಕ್ | ಪ್ರಾಂಶುಪಾಲರು (ಇಂಜಿನಿಯರಿಂಗ್ ವಿಭಾಗ) | 75 | 06 | 69 |
| | ಪ್ರಾಂಶುಪಾಲರು (ನಾನ್-ಇಂಜಿನಿಯರಿಂಗ್ ವಿಭಾಗ) | 06 | 01 | 05 |
| ಒಟ್ಟು | | **81** | **07** | **74** |

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಪ್ರಾಂಶುಪಾಲರ ಹುದ್ದೆಗಳನ್ನು ಎ.ಐ.ಸಿ.ಟಿ.ಇ (All India Council for Technical Education) ನಿಯಮಗಳನ್ವಯ ಭರ್ತಿಮಾಡಬೇಕಾಗಿರುತ್ತದೆ. ಮಾರ್ಚ್ 2019ರಲ್ಲಿ 7ನೇ ಎಐಸಿಟಿಇ ಪರಿಷ್ಕೃತ ವೇತನ ಶ್ರೇಣಿ ನಿಯಮಗಳು ಜಾರಿಗೆ ಬಂದಿರುತ್ತವೆ. ಈ ನಿಯಮಗಳನ್ನು ಮತ್ತುಎ.ಐ.ಸಿ.ಟಿ.ಇಯ ಇತರ ಮಾರ್ಗಸೂಚಿಗಳನ್ನು ಹಾಗೂ ರಾಜ್ಯ ಸರ್ಕಾರದ ನಿಯಮ/ಆದೇಶ/ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ರಚಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಮಾನ್ಯ ಸಚಿವ ಸಂಪುಟದ ಅನುಮೋದನೆಗೆ ಮಂಡಿಸಲು ಕ್ರಮವಹಿಸಲಾಗುತ್ತಿದ್ದು, ಅನುಮೋದನೆಗೊಂಡ ನಂತರ ಅಧಿಸೂಚನೆಯ ಮೂಲಕ ನೂತನ ವೃಂದ ಮತ್ತು ನೇಮಕಾತಿ ನಿಯಮಗಳನ್ನು (Cadre and Recuritment Rules) ಜಾರಿಗೊಳಿಸಿದ ಕೂಡಲೇ ಖಾಲಿಯಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುವುದು.

**ಸಂಖ್ಯೆ:ಇಡಿ 13 ಟಿಪಿಇ 2024**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು